# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ನಿರಾಣಿ ಹಣಮಂತ ರುದ್ರಪ್ಪ ಇವರುಗಳು ನಿಯಮ 330ರಡಿ ಕೋರಿರುವ ಸೂಚನೆಗೆ ಉತ್ತರ

**ಸೂಚನೆ:**

**ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳಲ್ಲಿ ಶೈಕ್ಷಣಿಕ ಜಾಗೃತಿ ಹೆಚ್ಚಾದಂತೆ ವಸತಿ ಶಾಲೆ ಹಾಗೂ ಹಾಸ್ಟೆಲ್ ಅವಲಂಬನೆ ಹೆಚ್ಚಾಗಿದೆ. ವರ್ಷದಿಂದ ವರ್ಷಕ್ಕೆ ಬೇಡಿಕೆ ವಿಪರೀತವಾಗಿದೆ. ಆದರೆ, ಬಣ್ಣ-ಬಣ್ಣದ ಕನಸು ಕಟ್ಟಿಕೊಂಡು ವಸತಿ ಶಾಲೆ, ಹಾಸ್ಟೆಲ್ ಗೆ ಪ್ರವೇಶ ಪಡೆಯುವ ಮಕ್ಕಳಿಗೆ ಮೊದಲು ದರ್ಶನವಾಗುವುದೇ ಸೌಲಭ್ಯಗಳ ಮರೀಚಿಕೆಯ ತೋರಣ. ಕಾಲಕಾಲಕ್ಕೆ ಸರ್ಕಾರವು ಸಮಸ್ಯೆಯ ಆಳ ಅರಿಯದ ಪರಿಣಾಮ ಹಾಸ್ಟೆಲ್ ಮತ್ತು ವಸತಿ ಶಾಲೆಗಳಲ್ಲಿ ಸಮಸ್ಯೆಗಳು ಬೃಹದಾಕರಾವಾಗಿ ಬೆಳೆದು ನಿಂತಿದ್ದು, ಮಕ್ಕಳು ಸೌಲಭ್ಯ ಸಿಗದೇ ಅಕ್ಷರಶಃ ಶೋಷಣೆಗೆ ಒಳಗಾಗುತ್ತಿದ್ದಾರೆ. ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್, ವಸತಿ ನಿಲಯಗಳು ಗುಣಮಟ್ಟದ ಆಹಾರದ ಕೊರತೆ, ಆಶ್ರಯ ಕೊರತೆ, ಮೂಲಸೌಕರ್ಯಗಳ ಕೊರತೆ, ನಿರ್ವಹಣೆಯ ಕೊರತೆ, ವಾರ್ಡನ್‌ಗಳ ಕೊರತೆ ಮತ್ತು ಹೀಗೆ ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿವೆ. ಬಾಡಿಗೆ ಕಟ್ಟಡಗಳಲ್ಲಿ ನಡೆಯು ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳು ದುಸ್ಥಿತಿಯಲ್ಲಿವೆ. ಅಲ್ಲಿ ಸರಿಯಾದ ಶೌಚಗೃಹ , ಸ್ನಾನ ಗೃಹಗಳು ಇಲ್ಲದೆ ತೆರೆದ ಜಾಗದಲ್ಲಿ ನಿತ್ಯಕರ್ಮಗಳನ್ನು ಪೂರೈಸಬೇಕಿದೆ. ಹೀಗೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳಲ್ಲಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿದ್ದು, ಅವರ ಕಲಿಕೆಗೆ ಕಷ್ಟವಾಗುತ್ತಿರುವ ಕುರಿತು.**

**ಹೇಳಿಕೆ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 2445 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಈ ವಿದ್ಯಾರ್ಥಿನಿಲಯಗಳಲ್ಲಿ 228661 ವಿದ್ಯಾರ್ಥಿಗಳಿಗೆ ಪ್ರವೇಶಾ ವಕಾಶವನ್ನು ಕಲ್ಪಿಸಲಾಗಿರುತ್ತದೆ. ವಿವರಗಳು ಈ ಕೆಳಕಂಡಂತಿದೆ.

| ಕ್ರ. ಸಂ. | ವಿವರ | ವಿದ್ಯಾರ್ಥಿನಿಲಯಗಳ ಸಂಖ್ಯೆ | | | ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆ | | |
|---|---|---|---|---|---|---|---|
| | | ಬಾಲಕರು | ಬಾಲಕಿಯರು | ಒಟ್ಟು | ಬಾಲಕರು | ಬಾಲಕಿಯರು | ಒಟ್ಟು |
| 1 | ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು | 993 | 284 | 1277 | 53197 | 15606 | 68803 |
| 2 | ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು | 529 | 639 | 1168 | 73044 | 86814 | 159858 |
| | **ಒಟ್ಟು** | **1522** | **923** | **2445** | **126241** | **102420** | **228661** |

ಇಲಾಖೆಯಡಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 2445 ವಿದ್ಯಾರ್ಥಿಗಳ ಪೈಕಿ 1620 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ 628 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ 197 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ.

ಇಲಾಖಾ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಬೇಡಿಕೆ ಮತ್ತು ಅನುದಾನದ ಲಭ್ಯತೆಯನುಸಾರ ಒದಗಿಸಲಾಗಿರುತ್ತದೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಸ್ಥಳಾವಕಾಶದ ಕೊರತೆಯಿಂದಾಗಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದು ಕಷ್ಟಸಾಧ್ಯವಾಗಿದ್ದು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸ್ವಂತ ಕಟ್ಟಡಗಳನ್ನು ನಿರ್ಮಿಸುವುದು ಅವಶ್ಯಕವಿರುತ್ತದೆ.

ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಪ್ರಸ್ತುತ 487 ನಿವೇಶನಗಳು ಲಭ್ಯವಿರುತ್ತವೆ ಹಾಗೂ 163 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ.

2..

ಇನ್ನುಳಿದ ವಿದ್ಯಾರ್ಥಿನಿಲಯಗಳ ಸ್ವಂತ ಕಟ್ಟಡ ನಿರ್ಮಾಣವನ್ನು ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾರ್ಯಕ್ರಮದಡಿ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ಕೈಗೊಳ್ಳಲಾಗುವುದು.

ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ವಾಸ್ತವ್ಯ ಕಲ್ಪಿಸುವ ನಿಟ್ಟಿನಲ್ಲಿ ರೂ.100.00ಕೋಟಿಗಳ ವೆಚ್ಚದಲ್ಲಿ ಮೂಲಭೂತ ಸೌಕರ್ಯಗಳಾದ ಚಪಾತಿ ತಯಾರಿಸುವ ಯಂತ್ರಗಳು,ಕಾಯರ್ ಮ್ಯಾಟ್ರೆಸ್‌ಗಳು, ಟೂ ಟಯರ್ ಕಾಟುಗಳು ಹಾಗೂ ಜೋಳದ ರೊಟ್ಟಿ ತಯಾರಿಸುವ ಯಂತ್ರಗಳನ್ನು ಸರಬರಾಜು ಪಡೆದು ಪೂರೈಕೆ ಮಾಡಲಾಗಿರುತ್ತದೆ ಹಾಗೂ ರೂ.150.00ಕೋಟಿಗಳ ವೆಚ್ಚದಲ್ಲಿ ಒಟ್ಟು 1203 ವಿದ್ಯಾರ್ಥಿನಿಲಯಗಳ ಕಟ್ಟಡ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

- ಉಚಿತ ಭೋಜನಾ ಹಾಗೂ ವಾಸ್ತವ್ಯ ವ್ಯವಸ್ಥೆ.
- ಮೆಟ್ರಿಕ್ ಪೂರ್ವ ನಿಲಯಾರ್ಥಿಗಳಿಗೆ ಜಮಖಾನ / ಹೊದಿಕೆಗಳನ್ನು ಒದಗಿಸಲಾಗುತ್ತಿದೆ.
- ಮೆಟ್ರಿಕ್ ಪೂರ್ವ ನಿಲಯಾರ್ಥಿಗಳಿಗೆ ನೈಟ್ ಡ್ರೆಸ್ ಹಾಗು ಟ್ರಾಕ್ ಸೂಟ್
- ಮೆಟ್ರಿಕ್ ಪೂರ್ವ ನಿಲಯಾರ್ಥಿಗಳಿಗೆ ಪಠ್ಯ ಪುಸ್ತಕ ಮತ್ತು ಲೇಖನ ಸಾಮಗ್ರಿ ನೀಡಲಾಗುವುದು.
- ನಿರ್ಮಲ ಹಾಗೂ ಸಿರಿಗಂಧ ಕಿಟ್ ಸರಬರಾಜು : ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ನಿಲಯಾರ್ಥಿಗಳಿಗೆ ಈ ಕೆಳಗಿನ ಸಾಮಗ್ರಿಗಳನ್ನು ಕರ್ನಾಟಕ ಸೋಪ್ಸ್ & ಡಿಟರ್ಜೆಂಟ್ ಲಿಮಿಟೆಡ್ ಇವರಿಂದ ಖರೀದಿಸಿ ಒದಗಿಸಲಾಗುತ್ತಿದೆ.

(ಪ್ರತಿ ತಿಂಗಳಿಗೆ)

| ವಿವರ | ಸಂಖ್ಯೆ |
|---|---|
| ಮೈಸೂರು ಸ್ಯಾಂಡಲ್ ಸೋಪ್ - 125 ಗ್ರಾಂ | 1 |
| ಮೈಸೂರು ಡಿಟರ್ಜೆಂಟ್ - 150 ಗ್ರಾಂ | 2 |
| ಕೊಬ್ಬರಿ ಎಣ್ಣೆ - 100 ಗ್ರಾಂ | 1 |
| ಟಾಲ್ಕಮ್ ಪೌಡರ್ - 50 ಗ್ರಾಂ (ಬಾಲಕಿಯರಿಗೆ) | 1 |
| ಟೂತ್ ಪೇಸ್ಟ್ - 50 ಗ್ರಾಂ | 1 |
| ಟೂತ್ ಬ್ರಷ್(3 ತಿಂಗಳಿಗೊಮ್ಮೆ) | 1 |

- ವಿದ್ಯಾರ್ಥಿ ನಿಲಯಗಳಲ್ಲಿ ಸುಸಜ್ಜಿತ ಗ್ರಂಥಾಲಯ ವ್ಯವಸ್ಥೆ.
- ವಾರ್ತಾ ಪತ್ರಿಕೆ ಮತ್ತು ನಿಯತಕಾಲಿಕೆ ಸರಬರಾಜು.
- ಕ್ರೀಡಾ ಸಾಮಗ್ರಿಗಳು.
- ವೈದ್ಯಕೀಯ ಸೌಲಭ್ಯ.
- ಶುದ್ಧ ಕುಡಿಯುವ ನೀರಿನ ವ್ಯವಸ್ಥೆ.
- ಶೌಚಾಲಯ ವ್ಯವಸ್ಥೆ.
- ಡಿಜಿಟಲ್ ಲೈಬ್ರರಿ/ ಕಂಪ್ಯೂಟರ್.
- ವಿದ್ಯಾರ್ಥಿಗಳಿಗೆ ಕಾಟು, ಬೆಡ್ಡುಗಳ ವ್ಯವಸ್ಥೆ.
- ಸೋಲಾರ್ ವಾಟರ್ ಹೀಟರ್ ನಿಂದ ಬಿಸಿನೀರಿನ ವ್ಯವಸ್ಥೆ.

ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಆಯಾ ಆರ್ಥಿಕ ವರ್ಷದಲ್ಲಿ ಒದಗಿಸಲಾಗುವ ಅನುದಾನ ಹಾಗೂ ರಾಜ್ಯದ ಒಟ್ಟಾರೆ ಬೇಡಿಕೆಯನುಸಾರ ಹಂತ ಹಂತವಾಗಿ ಸ್ವಂತ ಕಟ್ಟಡಗಳ ನಿರ್ಮಾಣ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುವುದು. ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಅವಶ್ಯವಿರುವ ನಿಲಯಪಾಲಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

ಮುಂದುವರೆದಂತೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 174 ವಸತಿ ಶಾಲೆಗಳು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿವೆ. ಹಿಂದುಳಿದ ವರ್ಗಗಳ 174 ವಸತಿ ಶಾಲೆ/ಕಾಲೇಜುಗಳ ಪೈಕಿ 136 ವಸತಿ ಶಾಲೆ/ಕಾಲೇಜುಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. 29 ವಸತಿ ಶಾಲೆ/ಕಾಲೇಜುಗಳು ಆಯಾ ಪ್ರದೇಶದಲ್ಲಿ ವಸತಿ ಶಾಲೆ/ಕಾಲೇಜುಗಳನ್ನು ನಡೆಸಲು ಜಿಲ್ಲಾ ಮಟ್ಟದ ಅಧಿಕಾರಿಗಳು ಸೂಕ್ತ ವ್ಯವಸ್ಥೆಯನ್ನು ಹೊಂದಿರುವ ಕಟ್ಟಡಗಳನ್ನು ಬಾಡಿಗೆ ಪಡೆದು ನಡೆಸಲಾಗುತ್ತಿದೆ. ಶಾಲೆ/ಕಾಲೇಜುಗಳನ್ನು ನಡೆಸಲು ಸೂಕ್ತ ಬಾಡಿಗೆ ಕಟ್ಟಡ ಲಭ್ಯವಿಲ್ಲದಿರುವುದರಿಂದ 09 ವಸತಿ ಶಾಲೆಗಳು ಬಾಡಿಗೆ ರಹಿತ / ಸಂಘದ ಸ್ವಂತ ಕಟ್ಟಡದಲ್ಲಿ ಸಂಯೋಜಿತವಾಗಿ ಕಾರ್ಯನಿರ್ವಹಿಸುತ್ತಿವೆ ಮತ್ತು 38 ವಸತಿ/ಕಾಲೇಜುಗಳ ಪೈಕಿ 06 ವಸತಿ ಶಾಲೆ/ಕಾಲೇಜುಗಳ ಕಟ್ಟಡ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, 06 ವಸತಿ ಶಾಲೆ/ಕಾಲೇಜುಗಳ ಶಾಲಾ ಸಂಕೀರ್ಣ ನಿರ್ಮಾಣ ಮಾಡಲು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.

ವಸತಿ ಶಾಲೆ/ಕಾಲೇಜುಗಳ ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ ರೂ.1750/- ರಂತೆ ಆಹಾರ ವೆಚ್ಚವನ್ನು ಒದಗಿಸಲಾಗುತ್ತಿದೆ. ವಸತಿ ಶಾಲೆ/ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ವಿಭಾಗವಾರು ಜಿಲ್ಲೆಗಳ ಆಹಾರ ಪದ್ಧತಿ ಕ್ರಮಗಳಂತೆ ಮೆನ್ಯು ಚಾರ್ಟ್ ಪ್ರಕಾರ ಉತ್ತಮ ಗುಣಮಟ್ಟದ ಆಹಾರ ಒದಗಿಸಲಾಗುತ್ತಿದೆ ಹಾಗೂ ವಸತಿ ಶಾಲೆ/ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಾಯೋಗಿಕವಾಗಿ ಸಿರಿಧಾನ್ಯ ಆಧಾರಿತ ಉಪಹಾರವನ್ನು ಸರಬರಾಜು ಮಾಡುತ್ತಿರುವುದನ್ನು 2ನೇ ಹಂತದಲ್ಲಿ ರಾಜ್ಯದ ಪ್ರತಿ ಕಂದಾಯ ಪ್ರಾದೇಶಿಕ ವಿಭಾಗವಾರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಆಯ್ಕೆಯಾಗಿರುವ ಎರಡು ವಸತಿ ಶಾಲೆಗಳಲ್ಲಿ ಸಿರಿಧಾನ್ಯ RCT (Randomized Controlled Trial) ತಂತ್ರಜ್ಞಾನವನ್ನು ಅಳವಡಿಸಿಕೊಂಡು ನುರಿತ ಸಂಸ್ಥೆಗಳಿಂದ ಅಧ್ಯಯನವನ್ನು ಮಾಡಲು ಕ್ರಮವಹಿಸಲಾಗಿದೆ.

ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಆಹಾರ, ಸಮವಸ್ತ್ರ, ಶೂ, ಸಾಕ್ಸ್ ಪಠ್ಯ ಪುಸ್ತಕ, ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳು, ಶುಚಿ ಕಿಟ್‌ಗಳನ್ನು ನಿರಂತರವಾಗಿ ಪೂರೈಕೆ ಮಾಡಲಾಗುತ್ತಿದೆ. ಅಲ್ಲದೆ ಸ್ವಂತ ಕಟ್ಟಡ ಹೊಂದಿರುವ ವಸತಿ ಶಾಲೆ/ ಕಾಲೇಜುಗಳ ವಿದ್ಯಾರ್ಥಿಗಳಿಗೆ ಡೆಸ್ಕ್ ಕಂ ಬೆಂಚ್, ಟೂ-ಟಯರ್ ಕಾಟ್, ಹಾಸಿಗೆ, ಡೈನಿಂಗ್ ಟೇಬಲ್ ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಹಂತ ಹಂತವಾಗಿ ಅನುದಾನದ ಲಭ್ಯತೆ ಆಧಾರದ ಮೇಲೆ ಒದಗಿಸಲಾಗುತ್ತಿದೆ. ಅದರಂತೆ ಬಾಡಿಗೆ ಕಟ್ಟಡಗಳಲ್ಲಿರುವ ವಸತಿ ಶಾಲೆ/ಕಾಲೇಜುಗಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಸಹ ಆದ್ಯತೆ ಮೇರೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 174 ವಸತಿ ಶಾಲೆ/ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ, ಆಹಾರ ಮತ್ತಿತರ ಅವಶ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಿ, ಶಾಲೆ/ ಕಾಲೇಜುಗಳಲ್ಲಿರುವ ಇನ್ನಿತರೆ ಸಮಸ್ಯೆಗಳನ್ನು ಬಗೆಹರಿಸಲು ಕಾಲ ಕಾಲಕ್ಕೆ ಅಗತ್ಯ ಕ್ರಮಗಳನ್ನು ತಗೆದುಕೊಂಡು ವಿದ್ಯಾರ್ಥಿಗಳಿಗೆ ಉತ್ತಮ ಕಲಿಕೆಗೆ ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ.

ಸಂಖ್ಯೆ: ಹಿಂವಕ 179 ಬಿಎಂಎಸ್ 2024

**(ಶಿವರಾಜ ಎಸ್ ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು